<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಡಿ ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 265 |
| ಉತ್ತರಿಸಬೇಕಾದ ದಿನಾಂಕ | : | 16-07-2024 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರವನ್ನು ಹೆಚ್ಚಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? | ಸಹಕಾರ ಸಂಘಗಳಲ್ಲಿ ಮಹಿಳೆಯರ ಪಾತ್ರವನ್ನು ಹೆಚ್ಚಿಸಲು ಕೈಗೊಂಡಿರುವ ಕ್ರಮಗಳು:<br>1) ಮಹಿಳೆಯರನ್ನು ಸಹಕಾರ ಸಂಘಗಳಲ್ಲಿ ಸದಸ್ಯತ್ವ ಪಡೆಯಲು ಸರ್ಕಾರದಿಂದ ಷೇರು ಮೊತ್ತವನ್ನು ಒದಗಿಸಲಾಗುತ್ತಿದೆ.<br>2) ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಕಾರ ಸಂಘಗಳ ಮೂಲಕ ಶೂನ್ಯ ಬಡ್ಡಿದರದಲ್ಲಿ ಗರಿಷ್ಟ 5.00 ಲಕ್ಷದವರೆಗೆ ಸಾಲ ನೀಡುವ ಯೋಜನೆ ಜಾರಿಯಲ್ಲಿರುತ್ತದೆ.<br>3) ಸಹಕಾರ ಸಂಘಗಳ ಆಡಳಿತ ಮಂಡಳಿ ರಚನೆಯಲ್ಲಿ ಪ್ರತ್ಯೇಕವಾಗಿ 02 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿರಿಸಲಾಗಿದೆ.<br>4) ಮಹಿಳಾ ಸಹಕಾರ ಸಂಘಗಳಿಗೆ ತಾಲ್ಲೂಕು ಪಂಚಾಯಿತಿ ಯೋಜನೆಯಡಿ ಅನುದಾನ ಒದಗಿಸಲಾಗುತ್ತಿದೆ.<br>5) ಮಹಿಳಾ ಸಹಕಾರ ಸಂಘಗಳ ರಚನೆಗೆ ಉತ್ತೇಜನ ನೀಡಲು, ಮಹಿಳಾ ಸಹಕಾರ ಸಂಘಗಳ ನೋಂದಣಿ ಪೂರ್ವ ಷೇರು ಹಣ ಸಂಗ್ರಹಿಸುವಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಲಾಗುತ್ತಿದೆ. |

| | | |
|---|---|---|
| | | 6) ಮಹಿಳಾ ಸಹಕಾರ ಸಂಘಗಳ ನೋಂದಣಿ ಶುಲ್ಕದಲ್ಲಿ ಶೇ.50 ರಷ್ಟು ರಿಯಾಯಿತಿ ಸೌಲಭ್ಯವಿರುತ್ತದೆ.<br><br>ಸಹಕಾರ ಸಂಘಗಳ ಆಡಳಿತ ಮಂಡಳಿ ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಛಿಸುವ ಮಹಿಳಾ ಅಭ್ಯರ್ಥಿಗಳಿಗೆ ಚುನಾವಣಾ ಠೇವಣಿಯಲ್ಲಿ ಶೇ.50 ರಷ್ಟು ರಿಯಾಯಿತಿ ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಹಿಂದುಳಿದ ವರ್ಗಗಳ ವಿಶೇಷವಾಗಿ ಮಹಿಳೆಯರ ಆದಾಯ ಉತ್ಪಾದನೆಗೆ ಅವಕಾಶಗಳನ್ನು ಸೃಷ್ಟಿಸಲಾಗಿದೆಯೇ? | ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳನ್ನು ನೋಂದಣಿ ಮಾಡಿ, ಸರ್ಕಾರದ ಮೂಲಕ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ. ಅಧಿಕೃತವಾಗಿ ನೋಂದಣಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಕಾರ ಸಂಘಗಳ ಮೂಲಕ ರಿಯಾಯಿತಿ ಬಡ್ಡಿದರದಲ್ಲಿ ಸಾಲ ನೀಡಿ ಮಹಿಳೆಯರ ಆದಾಯ ಉತ್ಪಾದನೆಗೆ ಸಹಕಾರ ನೀಡಲಾಗುತ್ತಿದೆ. |
| ಇ) | ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರವು ಯಾವುದಾದರೂ ಯೋಜನೆಗಳನ್ನು ರೂಪಿಸಿದೆಯೇ? (ವಿವರ ಒದಗಿಸುವುದು) | • ರಾಜ್ಯ ಸರ್ಕಾರವು ಮಹಿಳೆಯರನ್ನು ಎಲ್ಲಾ ವಿಧದ ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ನೋಂದಾಯಿಸಲು ಷೇರು ಸಹಾಯಧನ ನೀಡಿ, ಈ ಸಮುದಾಯವನ್ನು ಸಹಕಾರಿ ಕ್ಷೇತ್ರದಲ್ಲಿ ಮಹಿಳೆಯರ ಸಬಲೀಕರಣಕ್ಕಾಗಿ ಯೋಜನೆ ಜಾರಿಯಲ್ಲಿರುತ್ತದೆ.<br>• ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಹಕಾರ ಸಂಘಗಳ ಮೂಲಕ ಶೂನ್ಯ ಬಡ್ಡಿದರದಲ್ಲಿ ಗರಿಷ್ಟ 5.00 ಲಕ್ಷದವರೆಗೆ ಸಾಲ ನೀಡುವ ಯೋಜನೆ ಜಾರಿಯಲ್ಲಿರುತ್ತದೆ.<br><br>ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳನ್ನು ನೋಂದಣಿ ಮಾಡಿ, ಸರ್ಕಾರದ ಮೂಲಕ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ. |

| | | |
|---|---|---|
| ಈ) | ಸರ್ಕಾರವು ಸಹಕಾರ ಸಂಘಗಳ ಮೂಲಕ ಮಹಿಳೆಯರಿಗೆ ಕೌಶಲ್ಯ ಅಭಿವೃದ್ಧಿಯನ್ನು ನೀಡುತ್ತಿದೆಯೇ? ಹಾಗಿದ್ದಲ್ಲಿ, ವಿವರ ಒದಗಿಸುವುದು. | 1. ಕೌಶಲ್ಯಾಭಿವೃದ್ಧಿ ಇಲಾಖೆಯು ಪ್ರತಿಗ್ರಾಮ ಪಂಚಾಯಿತಿಗಳಲ್ಲಿ ರಚಿಸಿರುವ ಸ್ವಸಹಾಯ ಗುಂಪುಗಳ ಫೆಡರೇಷನ್‌ಗಳಲ್ಲಿ ಕೌಶಲ್ಯ ತರಬೇತಿಗಾಗಿ ಮಹಿಳಾ ಸ್ವಸಹಾಯ ಗುಂಪುಗಳನ್ನು ಸದಸ್ಯರನ್ನಾಗಿಸಲು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳಿಗೆ ಸೂಚನೆ ನೀಡಲಾಗಿರುತ್ತದೆ.<br>2. ರಾಜ್ಯ ಎನ್‌ಆರ್‌ಎಲ್‌ಎಮ್ ಮಿಷನ್ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುವುಗಾರರನ್ನು ನೇಮಕ ಮಾಡಿ ಇವರ ಮೂಲಕ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರಎಲ್ಲಾ ಅವಶ್ಯಕತೆಗಳನ್ನು ಪೂರೈಸಲು ಶ್ರಮಿಸಲಾಗುತ್ತಿದೆ. ಇದಲ್ಲದೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಸ್ವಸಹಾಯ ಗುಂಪುಗಳನ್ನು ರಚಿಸಲು ಮತ್ತು ಅವರ ಸಾಲವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವುದನ್ನು ನಿರ್ವಹಿಸಲು ಪ್ರತ್ಯೇಕವಾಗಿ ಕ್ಷೇತ್ರ ವೀಕ್ಷಕರನ್ನು ನೇಮಕ ಮಾಡಲಾಗಿದೆ.<br>3. ಕೌಶಲ್ಯಾಭಿವೃದ್ಧಿ ಇಲಾಖೆಯ ಮೂಲಕ ವಿವಿಧ ಇಲಾಖೆಗಳಿಂದ ಆಯೋಜನೆಗೊಳಿಸುತ್ತಿರುವ ಮೇಳಗಳಲ್ಲಿ ಸಹಕಾರ ಸಂಸ್ಥೆಗಳು ರಚಿಸಿದ ಸ್ವಸಹಾಯ ಗುಂಪುಗಳ ಸಿದ್ದ ವಸ್ತುಗಳನ್ನು ಸಹಾ ಪ್ರದರ್ಶಿಸಲು ಕ್ರಮ ಜರುಗಿಸಲಾಗುತ್ತಿದೆ. ಇದಲ್ಲದೆ ಕೇಂದ್ರ ಸರ್ಕಾರದ GeM (Government e Market place) Portal ಅನ್ನು ಸಹಕಾರ ಸಂಘಗಳು ಸಹ ಉಪಯೋಗಿಸಿಕೊಳ್ಳಲು ಅನುಮತಿ ನೀಡಿದ್ದು, ಸ್ವಸಹಾಯ ಸಿದ್ದ ವಸ್ತುಗಳನ್ನು ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಪ್ರಯತ್ನಿಸಲಾಗುತ್ತಿದೆ.<br>4. ಅಮೇಜಾನ್‌ನಂತಹ ಖಾಸಗಿ e-commerce ಸಂಸ್ಥೆಗಳ ಮೂಲಕವೂ ಸಹ ಮಹಿಳಾ ಸ್ವಸಹಾಯ ಗುಂಪುಗಳು ಸಿದ್ದಪಡಿಸಿರುವ ವಸ್ತುಗಳನ್ನು ಮಾರಾಟ ಮಾಡಲು ಸಂಬಂಧಪಟ್ಟ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳ ಮೂಲಕ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ತರಬೇತಿ ನೀಡಲಾಗಿದೆ. |
| ಉ) | ಇಲ್ಲದಿದ್ದಲ್ಲಿ, ಭವಿಷ್ಯದಲ್ಲಿ ಸಹಕಾರ ಸಂಘಗಳ ಮೂಲಕ ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಸರ್ಕಾರ ಪರಿಗಣಿಸಿ ಕ್ರಮ ಕೈಗೊಳ್ಳುವುದೇ? | |

| | | |
|---|---|---|
| | | 5. ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ರಚಿಸಿದ RUDSET (Rural Development and Self Employment Training Institute) ಮೂಲಕ ಸ್ವಸಹಾಯ ಗುಂಪುಗಳಿಗೆ ವಿವಿಧ ಸ್ವಂತ ಉದ್ಯೋಗಗಳ ಬಗ್ಗೆ ತರಭೇತಿ ನೀಡಲಾಗುತ್ತಿದೆ ಹಾಗೂ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ತರಬೇತಿ ಸಂಸ್ಥೆಗಳಲ್ಲಿ ಸ್ವಸಹಾಯ ಗುಂಪುಗಳಿಗೆ ತರಬೇತಿ ನೀಡಲು ಜಿಲ್ಲಾ ಸಹಕಾರ ಬ್ಯಾಂಕುಗಳಿಗೆ ಸೂಚನೆ ನೀಡಲಾಗಿದೆ. |

**ಸಂಖ್ಯೆ: ಸಿಒ 154 ಸಿಎಲ್ಎಸ್ 2024**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**